ಶ್ರೀ ವಾಟಾಳ್ ನಾಗರಾಜ್:- ಇದ್ದಕ್ಕಿದ್ದಹಾಗೆ ಕೂಡಲಸಂಗಮ ವಿಧೇಯಕ ತಂದಿದ್ದೀರಿ ನೀವು. ಯಾರಿಗಾದರೂ ಹೇಳಿದ್ದೀರಾ ತರುವುದಕ್ಕಿಂತ ಮುಂಚೆ?

ಅಧ್ಯಕ್ಷರು: ಪ್ರಸ್ತಾವ ಏನೆಂದರೆ:

''1994ನೇ ಸಾಲಿನ ಕೂಡಲಸಂಗಮ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು. ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ವೀರಪ್ಪ ಮೊಯಿಲಿ (ಮುಖ್ಯಮಂತ್ರಿಯವರು):- ಸನ್ಮಾನ್ಯ ಅಧ್ಯಕ್ಷರೆ, 1994ನೇ ಸಾಲಿನ ಕೂಡಲಸಂಗಮ ಅಭಿವೃದ್ಧಿ ಮಂಡಳಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ V

1994 ರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎಂ.ಯಾಹ್ಯಾ:- (ಉನ್ನತ ಶಿಕ್ಷಣ ಸಚಿವರು) :- ಮಾನ್ಯ ಅಧ್ಯಕ್ಷರೇ, '' 1994ರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.''

ಅಧ್ಯಕ್ಷರು:-ಪ್ರಸ್ತಾಪ ಏನೆಂದರೆ '' 1994ನೇ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್. ಎಂ. ಯಾಹ್ಯಾ:- ಮಾನ್ಯ ಅಧ್ಯಕ್ಷರೇ,'' 1994ರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.''

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ VI

ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನ ವಿನಿಯೋಗ (ನಂ.4) ವಿಧೇಯಕ, 1994.

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎಂ.ವೀರಪ್ಪ ಮೊಯಿಲಿ (ಮುಖ್ಯಮಂತ್ರಿ):- ಮಾನ್ಯ ಅಧ್ಯಕ್ಷರೆ, ಕರ್ನಾಟಕ ಧನ ವಿನಿಯೋಗ (ನಂ.4) ವಿಧೇಯಕ, 1994ನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.